# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 237

2) ಸದಸ್ಯರ ಹೆಸರು : ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 04-03-2020

4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನ ಮುಖ್ಯ ಉದ್ಯಾನವನಗಳಲೊಂದಾದ ಕಬ್ಬನ್‌ಪಾರ್ಕ್ ನಲ್ಲಿ ವಾಯುವಿಹಾರಕ್ಕೆಂದು ಬರುವ ಸಾರ್ವಜನಿಕರು ಹಾಗೂ ಹಿರಿಯ ನಾಗರೀಕರಿಗೆ ಅಲ್ಲಿರುವ ಕೆ.ಎಫ್.ಡಿ.ಸಿ ಮೀನು ಕ್ಯಾಂಟೀನ್ ನಲ್ಲಿ ಶುಚಿತ್ವ ಕಾಪಾಡದೆ ಉಳಿದ ತ್ಯಾಜ್ಯ ವಸ್ತುಗಳನ್ನು ವಿಲೇವಾರಿ ಮಾಡುತ್ತಿರುವುದರಿಂದ ಪರಿಸರ ಸ್ವಚ್ಛತೆ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರಿನ ಕಬ್ಬನ್‌ಪಾರ್ಕ್‌ನಲ್ಲಿರುವ ಮತ್ಸ್ಯದರ್ಶಿನಿ ಮೀನು ಉಪಾಹಾರ ಗೃಹದಲ್ಲಿ ಉತ್ಪಾದನೆಯಾಗುವ ತ್ಯಾಜ್ಯ ವಸ್ತುಗಳನ್ನು ನಿಯಮಾನುಸಾರ ವಿಲೇವಾರಿ ಮಾಡಲಾಗುತ್ತಿದೆ. ಉಪಾಹಾರ ಗೃಹದ ಒಳಗೆ ಮತ್ತು ಹೊರ ಆವರಣದಲ್ಲಿ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡು ಶುಚಿತ್ವವನ್ನು ಕಾಪಾಡಿಕೊಂಡು ಗ್ರಾಹಕರಿಗೆ ಉತ್ತಮ ರೀತಿಯ ಸೇವೆಯನ್ನು ನೀಡಲಾಗುತ್ತಿದೆ. ಶುಚಿತ್ವ ಕಾಪಾಡದೆ ಪರಿಸರ ಹಾಳಾಗುತ್ತಿರುವ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ. |
| ಆ) | ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ನಡೆಸುತ್ತಿರುವ ಕ್ಯಾಂಟೀನ್‌ಗಳಲ್ಲಿ ತ್ಯಾಜ್ಯ ವಿಲೇವಾರಿಗೆ ತೆಗೆದುಕೊಂಡಿರುವ ಕ್ರಮಗಳೇನು; | ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ನಡೆಸುತ್ತಿರುವ ಕ್ಯಾಂಟೀನ್‌ಗಳಲ್ಲಿ ತ್ಯಾಜ್ಯ ವಿಲೇವಾರಿಗೆ ನಿಗಮದ ಕ್ಯಾಂಟೀನ್ ವ್ಯಾಪ್ತಿಯಲ್ಲಿ ಬರುವ ನಗರ ಪಾಲಿಕೆ / ಪುರಸಭೆ ವಾಹನಗಳಿಗೆ ಪ್ರತೀ ದಿನ ತ್ಯಾಜ್ಯ ವಸ್ತುಗಳನ್ನು ನೀಡಿ ವಿಲೇವಾರಿ ಮಾಡಲಾಗುತ್ತಿದೆ. ಕಬ್ಬನ್‌ಪಾರ್ಕ್ ಉಪಾಹಾರ ಗೃಹದಲ್ಲಿ ಉತ್ಪಾದನೆಯಾಗುವ ತ್ಯಾಜ್ಯ ವಸ್ತುಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನೋಂದಾಯಿತ ಗುತ್ತಿಗೆದಾರರ ಮೂಲಕ ವಿಲೇವಾರಿ ಮಾಡಲಾಗುತ್ತಿದೆ. |

| | |
|---|---|
| ಕ್ಯಾಂಟೀನ್ ಇರುವ ಸ್ಥಳ ಯಾರ ಹಕ್ಕಿನಲ್ಲಿದೆ; ಬೇರೆಯವರ ಹೆಸರಿನಲ್ಲಿದ್ದರೆ ಅವರು ಲೋಕೋಪಯೋಗಿ ಇಲಾಖೆಯ ಎಸ್.ಆರ್. ಪ್ರಕಾರ ಬಾಡಿಗೆ ಪಾವತಿಸುತ್ತಿದ್ದಾರೆಯೆ; ಪಾವತಿಸಲು ಯಾವ ಕ್ರಮ ಕೈಗೊಳ್ಳಲಾಗುವುದು? | ಬೆಂಗಳೂರು ಕಬ್ಬನ್‌ಪಾರ್ಕ್ ನಲ್ಲಿ ನಿಗಮವು ನಡೆಸುತ್ತಿರುವ ಮತ್ಸ್ಯದರ್ಶಿನಿ ಮೀನು ಉಪಾಹಾರ ಗೃಹದ ನಿವೇಶನ ಹಾಗೂ ಕಟ್ಟಡವು ಮೀನುಗಾರಿಕೆ ಇಲಾಖೆಯ (ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇ-1), ಬೆಂಗಳೂರು) ಒಡೆತನದಲ್ಲಿರುತ್ತದೆ.<br>ಸದರಿ ಕಟ್ಟಡದ ಬಾಡಿಗೆಯನ್ನು ಲೋಕೋಪಯೋಗಿ ಇಲಾಖೆಯ ಎಸ್.ಆರ್ ಪ್ರಕಾರ ನಿಗಧಿ ಪಡಿಸಲಾಗಿದೆ. ಕೆಎಫ್‌ಡಿಸಿ ಇದುವರೆವಿಗೂ ಬಾಡಿಗೆ ಮೊತ್ತವನ್ನು ಪಾವತಿಸಿರುವುದಿಲ್ಲ. ಬಾಡಿಗೆ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಕುರಿತು ನಿಗಮದ ಜೊತೆ ಪತ್ರವ್ಯವಹಾರ ನಡೆಸಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-32 ಮೀಇಯೋ 2020

(ಕೋಟಾ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು